CW.4 PW.4

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.794/2024

| | |
|---|---|
| ಸಾಕ್ಷಿದಾರರ ಹೆಸರು | ಪ್ರಕಾಶ್ |
| ತಂದೆಯ ಹೆಸರು | ಮಹದೇವಯ್ಯ |
| ವಯಸ್ಸು | 35 ವರ್ಷ |
| ವೃತ್ತಿ | ಖಾಸಗಿ ಚಾಲಕ |
| ವಿಳಾಸ | ಬೆಂಗಳೂರು |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 19.05.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿಯನ್ನು ನೋಡಿರುವುದಿಲ್ಲ. ಚಾಸಾ-1 ಮತ್ತು 3 ರವರು ಗೊತ್ತಿರುತ್ತಾರೆ. ಚಾಸಾ-2 ಗೊತ್ತಿರುವುದಿಲ್ಲ. ಚಾಸಾ-5, ಚಾಸಾ-7 ರಿಂದ 9 ಗೊತ್ತಿರುತ್ತಾರೆ. ಚಾಸಾ-6 ಗೊತ್ತಿರುವುದಿಲ್ಲ.

ಅಪಘಾತದಲ್ಲಿ ಮೃತ ಹೊಂದಿರುವ ದೀಪು ನನ್ನ ತಮ್ಮ. ನಾನು ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿರುವುದಿಲ್ಲ. ಅದು ಹೇಗೆ ಆಗಿರುತ್ತದೆಂದು ನನಗೆ ಗೊತ್ತಿರುವುದಿಲ್ಲ. ಪೋಲೀಸರೆ ನನ್ನನ್ನು ಠಾಣೆಗೆ ಕರೆಯಿಸಿ ಒಂದು ದಾಖಲೆಗೆ ಸಹಿ ಪಡೆದಿದ್ದು ಅದರಲ್ಲಿ ಏನು ಬರೆದಿರುತ್ತದೆಂದು ತಿಳಿಸಿರುವುದಿಲ್ಲ. ನಾನು ಆ ದಿನ ಆಸ್ಪತ್ರೆಯ ವಿಚಾರದಲ್ಲಿ ಇದ್ದ ಕಾರಣ ದಾಖಲೆಯನ್ನು ನೋಡಿರುವುದಿಲ್ಲ. ಈ ಸಂಬಂಧ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

CW.4 PW.4

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 29.02.2024 ರಂದು ಕನಕಪುರ ತಾಲ್ಲೂಕು ಕೋಡಿಹಳ್ಳಿ ಹೋಬಳಿ ಗರಳಾಪುರ ಗ್ರಾಮದ ನಾಗರಾಜು ರವರ ಮನೆಯ ಮುಂದಿನ ಮುಖ್ಯ ರಸ್ತೆಯಲ್ಲಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಬೆಳಿಗ್ಗೆ 10 ರಿಂದ 11 ಗಂಟೆಯವರೆಗೂ ಈಗ ಓದಿ ಹೇಳಿದಂತೆ ಸ್ಥಳ ಮಹಜರ್ ಮಾಡಿ ಸ್ಥಳದಲ್ಲಿದ್ದ ಅಪಘಾತಕ್ಕೆ ಒಳಗಾದ ಮತ್ತು ಅಪಘಾತ ಪಡಿಸಿದ ವಾಹನಗಳನ್ನು ಅಮಾನತು ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿ ಪ್ರಕರಣ ರಾಜಿ ಮಾಡಿಕೊಂಡಿದ್ದೇವೆಂದರೆ ಸರಿ. ಆದ್ದರಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**

CW.4 PW.4